## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ.- ಸಂಭಾವನೆ ನೀಡುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 6 ನೇಇವಿ 2010, ದಿನಾಂಕ: 20.04.2011
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಇಎನ್‌ಕ್ಯೂ 2008, ದಿನಾಂಕ: 09.08.2011
3) ವಿಚಾರಣಾಧಿಕಾರಿಯವರ ವರದಿಯ ದಿನಾಂಕ: 14.0-5.2012.

********

ಪ್ರಸ್ತಾವನೆ:

ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ.15,000/-ಗಳ ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮಾಂಕ-(1)ರಲ್ಲಿ ಓದಲಾದ ದಿನಾಂಕ: 20.04.2011ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬ್ಯಾಡಗಿ, ಇಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 2006-07ನೇ ಸಾಲಿನಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ಪಡೆಯದೆ ಕಾಮಗಾರಿಗಳನ್ನು ಪ್ರಾರಂಭಿಸಿದ ಮತ್ತು ಪ್ರದೇಶಾಭಿವೃದ್ಧಿ ಯೋಜನೆ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಕರ್ತವ್ಯಲೋಪ ಎಸಗಿರುವ ಶ್ರೀ ಎ.ಡಿ.ಈಶ್ವರಪ್ಪ ಮತ್ತು ಶ್ರೀ ಎಂ.ಸಿ.ಶಂಕರಿಕೊಪ್ಪ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು, ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ಮೇಲೆ ಕ್ರಮಾಂಕ-(2)ರಲ್ಲಿ ಓದಲಾದ ದಿನಾಂಕ: 09.08.2011ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ, ಮೇಲೆ ಕ್ರಮಾಂಕ-(3)ರಲ್ಲಿ ಓದಲಾದ ದಿನಾಂಕ: 14.0.2012ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ ವಿಚಾರಣಾದಿಕಾರಿಗೆ ಸಂಭಾವನೆ ಮಂಜೂರು ಮಾಡಲು ಈ ಮುಂದಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಇಎನ್‌ಕ್ಯೂ 2008, ಬೆಂಗಳೂರು, ದಿನಾಂಕ:08.06.2012

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ ಜರುಗಿಸಿ ವರದಿ

ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳಿಗೆ ನಿಗದಿಪಡಿಸಿರುವ ರೂ.15,000/-(ವಾಹನ ಭತ್ಯೆಯೂ ಸೇರಿದಂತೆ)ಗಳನ್ನು ಪಾವತಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾವೇರಿ ಇವರಿಗೆ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

8/6/12
(ಎನ್.ವೈ.ಸಾಗರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
8/6/12

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ (ಆಡಿಟ್ ಮತ್ತು ಅಕೌಂಟ್ಸ್), ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾವೇರಿ.- ಸದರಿ ವಿಚಾರಣಾಧಿಕಾರಿಯವರ ಹೆಸರಿಗೆ ಚೆಕ್‌ನ್ನು ಬರೆದು ಅವರ ವಿಳಾಸಕ್ಕೆ ನೊಂದಣಿ ಅಂಚೆ ಮುಖಾಂತರ ಕಳುಹಿಸುವಂತೆ ಕೋರಿದೆ.
3) ಸಹಾಯಕ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾವೇರಿ.
4) ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಯೀಮ್ ಮಂಜಿಲ್, 2ನೇ ಮುಖ್ಯರಸ್ತೆ, 8ನೇ ಕ್ರಾಸ್, ಶಿವಗಿರಿ, ಧಾರವಾಡ-580001.
5) ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾವೇರಿ.
6) ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ ಉಪಕಾರ್ಯದರ್ಶಿ(ಆಡಳಿತ-1), ಇವರುಗಳ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
7) ಹೆಚ್ಚುವರಿ ಪ್ರತಿ/ರಕ್ಷಾ ಕಡತ/ಕಂಪ್ಯೂಟರ್ ಶಾಖೆ.